All India Radio: Bangalore
National Bulletin In Kannada
19.12.2025 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<>><><*><><<>

ಮುಖ್ಯಾಂಶಗಳು

- ’ವಿಕಸಿತ ಭಾರತ - ಜಿ ರಾಮ್ ಜಿ ಮಸೂದೆ-೨೦೨೫’ ಕ್ಕೆ ಸಂಸತ್ತು ಅಂಗೀಕಾರ
- ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದಕ್ಕೆ ಭಾರತ- ಓಮನ್ ಸಹಿ
- ವಿಶ್ವ ಆರೋಗ್ಯ ಸಂಸ್ಥೆಯ ಸಾಂಪ್ರದಾಯಿಕ ಔಷಧ ಜಾಗತಿಕ ಶೃಂಗಸಭೆಯ ಸಮಾರೋಪ ಸಮಾರಂಭದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಭಾಗಿ
- ಟಿ-೨೦ ಕ್ರಿಕೆಟ್ : ಫೈನಲ್‌ನಲ್ಲಿ ಹರಿಯಾಣ ವಿರುದ್ಧ ಗೆದ್ದ ಜಾರ್ಖಂಡ್‌ಗೆ ಮೊದಲ ಬಾರಿಗೆ ಒಲಿದ ಸೈಯದ್ ಮುಷ್ತಾಕ್ ಅಲಿ ಟ್ರೋಫಿ

<>><><*><><<>

’ವಿಕಸಿತ ಭಾರತ - ಗ್ಯಾರಂಟಿ ರೋಜ್‌ಗಾರ್ ಮತ್ತು ಆಜೀವಿಕಾ ಮಿಷನ್‌ಗಾಗಿ: ವಿಕಸಿತ ಭಾರತ - ಜಿ ರಾಮ್ ಜಿ ಮಸೂದೆ-೨೦೨೫’ ಅನ್ನು ಸಂಸತ್ತು ಅಂಗೀಕರಿಸಿದೆ. ರಾಜ್ಯಸಭೆಯು ನಿನ್ನೆ ರಾತ್ರಿ ಮಸೂದೆಯನ್ನು ಅನುಮೋದಿಸಿದೆ. ಇದಕ್ಕೂ ಮುನ್ನ ಲೋಕಸಭೆಯು ಮಸೂದೆಯನ್ನು ಅಂಗೀಕರಿಸಿತ್ತು. ವಿಕಸಿತ ಭಾರತ ೨೦೪೭ ರ ರಾಷ್ಟ್ರೀಯ ದೃಷ್ಟಿಕೋನಕ್ಕೆ ಅನುಗುಣವಾಗಿ ಗ್ರಾಮೀಣ ಅಭಿವೃದ್ಧಿ ಚೌಕಟ್ಟನ್ನು ಸ್ಥಾಪಿಸಲು ಮಸೂದೆ ಪ್ರಯತ್ನಿಸುತ್ತದೆ. ಶಾಸನದಡಿಯಲ್ಲಿ, ಪ್ರತಿ ಹಣಕಾಸು ವರ್ಷದಲ್ಲಿ ಕೌಶಲ್ಯರಹಿತ ಪ್ರತಿ ಗ್ರಾಮೀಣ ಕುಟುಂಬದ ಸದಸ್ಯರಿಗೆ ೧೨೫ ದಿನಗಳ ಉದ್ಯೋಗ ಖಾತರಿಯನ್ನು ಒದಗಿಸಲಾಗುತ್ತದೆ. ಎಲ್ಲಾ ರಾಜ್ಯಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ನಿಧಿ ಹಂಚಿಕೆ ಮಾದರಿಯು ೬೦:೪೦ ಆಗಿರುತ್ತದೆ. ಆದರೆ, ಈಶಾನ್ಯ ಮತ್ತು ಹಿಮಾಲಯದ ತಪ್ಪಲಿನ ರಾಜ್ಯಗಳ ಹಂಚಿಕೆ ವ್ಯವಸ್ಥೆಯು ೯೦:೧೦ ಆಗಿರುತ್ತದೆ. ರಾಜ್ಯ ಸರ್ಕಾರಗಳು ನಿರುದ್ಯೋಗ ಭತ್ಯೆ ಮತ್ತು ಪರಿಹಾರವನ್ನು ಪಾವತಿಸುವುದನ್ನು ಮುಂದುವರಿಸುತ್ತವೆ. ರಾಜ್ಯಸಭೆಯಲ್ಲಿ ಚರ್ಚೆಗೆ ಉತ್ತರಿಸಿದ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಸರ್ಕಾರವು ’ರಾಷ್ಟ್ರ ಮೊದಲು’ ಎಂಬ ಧ್ಯೇಯವಾಕ್ಯದೊಂದಿಗೆ ಕೆಲಸ ಮಾಡುತ್ತಿದೆ. ಹಳ್ಳಿಗಳ ಅಭಿವೃದ್ಧಿಯಿಲ್ಲದೆ ದೇಶ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ. ಸಮಾಜದ ವಂಚಿತ ವರ್ಗಗಳಿಗೆ ಸೇವೆ ಸಲ್ಲಿಸಲು ಸರ್ಕಾರ ಅವಿಶ್ರಾಂತವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು. ಚರ್ಚೆಯನ್ನು ಆರಂಭಿಸಿದ ಕಾಂಗ್ರೆಸ್‌ನ ಮುಕುಲ್ ವಾಸ್ನಿಕ್, ಮಸೂದೆಯನ್ನು ವಿರೋಧಿಸಿದರು. ಇದು ಕೋಟ್ಯಂತರ ಜನರ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ದೇಶದ ಬಡವರ ಉನ್ನತಿಗಾಗಿ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ದೇಶದ ಜನಸಂಖ್ಯೆಯ ಶೇಕಡ ೭೦ ರಷ್ಟು ಜನರು ಹಳ್ಳಿಗಳಲ್ಲಿ ವಾಸಿಸುತ್ತಿದ್ದಾರೆ ಮತ್ತು ಈ ಮಸೂದೆಯು ಅವರ ಜೀವನವನ್ನು ಸುಧಾರಿಸುವ ಗುರಿಯನ್ನು ಹೊಂದಿದೆ. ಮಸೂದೆಯು ವಿಕಸಿತ ಭಾರತವನ್ನು ನಿರ್ಮಿಸಲು ಸಹಾಯ ಮಾಡುತ್ತದೆ ಎಂದು ಬಿಜೆಪಿ ಸಂಸದ ಇಂದು ಬಾಲ ಗೋಸ್ವಾಮಿ ಹೇಳಿದರು. ಮಸೂದೆಯನ್ನು ಹಗುರವಾಗಿ ಪರಿಗಣಿಸಬಾರದು ಮತ್ತು ಇದನ್ನು ಆಯ್ಕೆ ಸಮಿತಿಗೆ ಕಳುಹಿಸಬೇಕು ಎಂದು ಕಾಂಗ್ರೆಸ್ ಸಂಸದ ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದರು.

<>><><*><><<>

ಭಾರತ-ಓಮನ್ ಎರಡೂ ಸ್ನೇಹಪರ ರಾಷ್ಟ್ರಗಳು ತಮ್ಮ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೦ ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಓಮನ್ ಭೇಟಿ ಬಹಳ ಮಹತ್ವದ್ದಾಗಿತ್ತು. ಓಮನ್‌ನ ಸುಲ್ತಾನ್ ಹೈತಮ್ ಬಿನ್ ತಾರಿಕ್ ಅವರ ಆಹ್ವಾನದ ಮೇರೆಗೆ ಓಮನ್‌ಗೆ ಅಧಿಕೃತ ಭೇಟಿ ನೀಡಿದ್ದ ಪ್ರಧಾನಿಯವರಿಗೆ, ಭಾರತ-ಓಮನ್ ಸಂಬಂಧಗಳಿಗೆ ಮತ್ತು ಅವರ ದೂರದೃಷ್ಟಿಯ ನಾಯಕತ್ವಕ್ಕೆ ಪ್ರಧಾನಿ ಮೋದಿಯವರ ಅಸಾಧಾರಣ ಕೊಡುಗೆಗಾಗಿ ಸುಲ್ತಾನ್ ಅವರಿಂದ 'ಆರ್ಡರ್ ಆಫ್ ಓಮನ್' ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಇದೇ ವೇಳೆ, ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಇದು ಎರಡೂ ದೇಶಗಳಿಗೆ ವಿವಿಧ ಕ್ಷೇತ್ರಗಳಲ್ಲಿ ಒಟ್ಟಾರೆ ಅಭಿವೃದ್ಧಿ ಮತ್ತು ವ್ಯಾಪಾರಕ್ಕೆ ಬಾಗಿಲು ತೆರೆಯುತ್ತದೆ ಹಾಗೂ ಭಾರತ-ಓಮನ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಗಮನಾರ್ಹವಾಗಿ ಬಲಪಡಿಸುತ್ತದೆ. ಕಡಲ ಸಹಕಾರ, ಉನ್ನತ ಶಿಕ್ಷಣ, ಕೃಷಿ, ಸಿರಿಧಾನ್ಯ ಕೃಷಿ ಕ್ಷೇತ್ರಗಳಲ್ಲಿ ೬ ಒಪ್ಪಂದಗಳಿಗೆ ಮತ್ತು ಓಮನ್ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ಹಾಗೂ ಭಾರತೀಯ ಕೈಗಾರಿಕಾ ಒಕ್ಕೂಟದ ನಡುವಿನ ಒಪ್ಪಂದಕ್ಕೆ ಎರಡೂ ಕಡೆಯವರು ಸಹಿ ಹಾಕಿದರು.

<>><><*><><<>

ನವದೆಹಲಿಯಲ್ಲಿ ಇಂದು ನಡೆಯಲಿರುವ ಎರಡನೇ ವಿಶ್ವ ಆರೋಗ್ಯ ಸಂಸ್ಥೆಯ ಸಾಂಪ್ರದಾಯಿಕ ಔಷಧ ಜಾಗತಿಕ ಶೃಂಗಸಭೆಯ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ, ಆಯುಷ್ ವಲಯಕ್ಕೆ ಮಾಸ್ಟರ್ ಡಿಜಿಟಲ್ ಪೋರ್ಟಲ್ ಆದ ಮೈ ಆಯುಷ್ ಇಂಟಿಗ್ರೇಟೆಡ್ ಸರ್ವೀಸಸ್ ಪೋರ್ಟಲ್ ಸೇರಿದಂತೆ ಹಲವಾರು ಆಯುಷ್ ಉಪಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ಆಯುಷ್ ಉತ್ಪನ್ನಗಳು ಮತ್ತು ಸೇವೆಗಳ ಗುಣಮಟ್ಟಕ್ಕೆ ಜಾಗತಿಕ ಮಾನದಂಡವಾಗಿ ಕಲ್ಪಿಸಲಾಗಿರುವ ಆಯುಷ್ ಮಾರ್ಕ್ ಅನ್ನು ಅವರು ಅನಾವರಣಗೊಳಿಸಲಿದ್ದಾರೆ. ಕಾರ್ಯಕ್ರಮದ ಸಂದರ್ಭದಲ್ಲಿ, ಪ್ರಧಾನಿ ಮೋದಿ ಅವರು ಯೋಗದಲ್ಲಿ ತರಬೇತಿಯ ಕುರಿತು ವಿಶ್ವ ಆರೋಗ್ಯ ಸಂಸ್ಥೆಯ ತಾಂತ್ರಿಕ ವರದಿ ಮತ್ತು From Roots to Global Reach: ೧೧ Years of Transformation in AYUSH ಪುಸ್ತಕವನ್ನು ಬಿಡುಗಡೆ ಮಾಡಲಿದ್ದಾರೆ.

ಭಾರತದ ಸಾಂಪ್ರದಾಯಿಕ ಔಷಧೀಯ ಪರಂಪರೆಯ ಅಶ್ವಗಂಧದ ಕುರಿತು ಸ್ಮರಣಾರ್ಥ ಅಂಚೆ ಚೀಟಿಯನ್ನು ಅವರು ಬಿಡುಗಡೆ ಮಾಡಲಿದ್ದಾರೆ. ೨೦೨೧-೨೦೨೫ ಅವಧಿಯಲ್ಲಿ ಯೋಗದ ಪ್ರಚಾರ ಮತ್ತು ಅಭಿವೃದ್ಧಿಗೆ ಅತ್ಯುತ್ತಮ ಕೊಡುಗೆಗಾಗಿ ಪ್ರಧಾನ ಮಂತ್ರಿಗಳ ಪ್ರಶಸ್ತಿಗಳನ್ನು ಪಡೆದವರನ್ನು ಅವರು ಸನ್ಮಾನಿಸಲಿದ್ದಾರೆ. ಭಾರತ ಮತ್ತು ಪ್ರಪಂಚದಾದ್ಯಂತದ ಸಾಂಪ್ರದಾಯಿಕ ಔಷಧ ಜ್ಞಾನ ವ್ಯವಸ್ಥೆಗಳ ವೈವಿಧ್ಯತೆ, ಆಳ ಮತ್ತು ಸಮಕಾಲೀನ ಪ್ರಸ್ತುತತೆಯನ್ನು ಪ್ರದರ್ಶಿಸುವ ’ಸಾಂಪ್ರದಾಯಿಕ ಔಷಧ ಡಿಸ್ಕವರಿ ಸ್ಪೇಸ್’ಗೆ ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಲಿದ್ದಾರೆ.

<>><><*><><<>

ಶಿಕ್ಷಣದಲ್ಲಿನ ಸವಾಲುಗಳನ್ನು ಎದುರಿಸಲು, ವಿಶೇಷವಾಗಿ ಗುಣಮಟ್ಟದ ಶಿಕ್ಷಣವನ್ನು ಹೆಚ್ಚು ಒಳಗೊಳ್ಳುವ, ಪ್ರವೇಶಿಸಬಹುದಾದ ಮತ್ತು ಸಮಾನವಾಗಿಸಲು ಕೃತಕ ಬುದ್ಧಿಮತ್ತೆ ಸಾಮರ್ಥ್ಯವನ್ನು ಹೊಂದಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನವದೆಹಲಿಯಲ್ಲಿ ಬೋಧನೆ ಮತ್ತು ಕಲಿಕೆಯಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆಯ ಕುರಿತಾದ ಸಮಾಲೋಚನಾ ಸಮಿತಿಯ ಮೂರನೇ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<>><><*><><<>

ದೆಹಲಿ ಮತ್ತು ಎನ್‌ಸಿಆರ್ ಪ್ರದೇಶದಲ್ಲಿ ಇಂದು ದಟ್ಟವಾದ ಮಂಜಿನ ಪರಿಸ್ಥಿತಿಯಿಂದಾಗಿ ಹಲವಾರು ವಿಮಾನಗಳು ಮತ್ತು ರೈಲುಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ. ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಡಿಮೆ ಗೋಚರತೆಯಿಂದಾಗಿ ಸುಮಾರು ೩೦ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ದೆಹಲಿ ವಿಮಾನ ನಿಲ್ದಾಣ ತಿಳಿಸಿದೆ. ದೆಹಲಿಗೆ ಹೋಗುವ ಹಲವಾರು ರೈಲುಗಳ ಸಂಚಾರದ ಮೇಲೂ ಪರಿಣಾಮ ಬೀರಿದೆ. ಸುಮಾರು ೧೫ ರೈಲುಗಳು ೩ ಗಂಟೆಗಳಿಗಿಂತ ಹೆಚ್ಚು ವಿಳಂಬವಾಗಿವೆ ಎಂದು ಭಾರತೀಯ ರೈಲ್ವೆಯ ದೆಹಲಿ ವಿಭಾಗ ತಿಳಿಸಿದೆ.

<>><><*><><<>

ಪುಣೆಯ ಮಹಾರಾಷ್ಟ್ರ ಕ್ರಿಕೆಟ್ ಅಸೋಸಿಯೇಶನ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಟಿ-೨೦ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ಹರಿಯಾಣವನ್ನು ೬೯ ರನ್‌ಗಳಿಂದ ಸೋಲಿಸಿ, ತಮ್ಮ ಮೊದಲ ಸೈಯದ್ ಮುಷ್ತಾಕ್ ಅಲಿ ಟ್ರೋಫಿ ಪ್ರಶಸ್ತಿಯನ್ನು ಜಾರ್ಖಂಡ್ ಗೆದ್ದುಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಜಾರ್ಖಂಡ್, ೨೦ ಓವರ್‌ಗಳಲ್ಲಿ ೩ ವಿಕೆಟ್‌ಗೆ ೨೬೨ ರನ್ ಗಳಿಸಿತು. ಇದು ಟಿ-೨೦ ಫೈನಲ್‌ನಲ್ಲಿ ದಾಖಲಾದ ಅತ್ಯಧಿಕ ಮೊತ್ತವಾಗಿದೆ. ನಾಯಕ ಇಶಾನ್ ಕಿಶನ್ ೪೯ ಎಸೆತಗಳಲ್ಲಿ ದಾಖಲೆಯ ೧೦೧ ರನ್ ಗಳಿಸಿದರೆ, ಕುಮಾರ್ ಕುಶಾಗ್ರ ೩೮ ಎಸೆತಗಳಲ್ಲಿ ೮೧ ರನ್ ಗಳಿಸಿದರು. ಇದಕ್ಕೆ ಉತ್ತರವಾಗಿ, ಹರಿಯಾಣ ೧೯.೩ ಓವರ್‌ಗಳಲ್ಲಿ ೧೯೩ ರನ್‌ಗಳಿಗೆ

ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಯಶವರ್ಧನ್ ದಲಾಲ್ ೨೨ ಎಸೆತಗಳಲ್ಲಿ ೫೩ ರನ್ ಗಳಿಸಿದರು.

<>><><*><><<>

ಪುರುಷರ ಕ್ರಿಕೆಟ್‌ನಲ್ಲಿ, ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಐದನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಪಂದ್ಯ ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ, ಪ್ರಸ್ತುತ ೨-೧ ಮುನ್ನಡೆ ಸಾಧಿಸಿದ್ದು, ಸರಣಿ ಕೈವಶ ಮಾಡಿಕೊಳ್ಳುವ ತವಕದಲ್ಲಿದೆ.  ಲಕ್ನೋದ ಏಕಾನಾ ಕ್ರೀಡಾಂಗಣದಲ್ಲಿ ಬುಧವಾರ ನಡೆದ ನಾಲ್ಕನೇ ಟಿ-೨೦ ಪಂದ್ಯ ತೀವ್ರ ಮಂಜಿನಿಂದಾಗಿ ರದ್ದಾಗಿತ್ತು.

<>><><*><><<>

ಕ್ರಿಸ್‌ಮಸ್ ಮತ್ತು ಹೊಸ ವರ್ಷದ ಸಂದರ್ಭದಲ್ಲಿ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಭಾರತೀಯ ರೈಲ್ವೆಯ ಒಂಬತ್ತು ವಲಯಗಳಲ್ಲಿ ೧೩೮ ವಿಶೇಷ ರೈಲುಗಳು ಸಂಚರಿಸಲಿವೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.  ಹಬ್ಬದ ಜನದಟ್ಟಣೆಯನ್ನು ಪೂರೈಸಲು ಪಶ್ಚಿಮ ರೈಲ್ವೆ ೨೯ ರೈಲುಗಳೊಂದಿಗೆ ಅತ್ಯಧಿಕ ಪಾಲನ್ನು ಹೊಂದಿದ್ದು, ಮಧ್ಯ ರೈಲ್ವೆ ೧೮ ರೈಲುಗಳನ್ನು ನಿರ್ವಹಿಸುತ್ತಿದೆ, ದಕ್ಷಿಣ ಮಧ್ಯ ರೈಲ್ವೆ ೨೯ ರೈಲುಗಳನ್ನು ಯೋಜಿಸಿದೆ ಮತ್ತು ಆಗ್ನೇಯ ಮಧ್ಯ ರೈಲ್ವೆ ೧೨ ರೈಲುಗಳನ್ನು ಓಡಿಸಲಿವೆ ಎಂದು ಸಚಿವಾಲಯ ಹೇಳಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>